# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಚೌಡೇಶ್ವರಿ ವಾರ್ಡ್ ನಂ-02ರಲ್ಲಿ

## ದಿನಾಂಕ: 29-06-2022 ರಂದು ನಡೆದ ಸಮಿತಿ ಸಭಾ ನಡವಳಿ.

ದಿನಾಂಕ: 29-06-2022 ರಂದು ಬೆಳಗ್ಗೆ 10.00 ಗಂಟೆಗೆ ಬಿ.ಬಿ.ಎಂ.ಪಿ ಯಲಹಂಕ ವಿಭಾಗದ ಕಛೇರಿಯಲ್ಲಿ ವಾರ್ಡ್ ನಂ-02ರ ವಾರ್ಡ್ ಸಮಿತಿಯ ಮಾನ್ಯ ನೋಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ನೆಡೆದ ವಾರ್ಡ್ ಕಮಟಿ ಸಭೆಯ ನಡವಳಿಗಳು.

| ಕ್ರ.ಸಂ | ಸಭೆಯಲ್ಲಿ ಭಾಗವಹಿಸಿದ ಅಧಿಕಾರಿ ಹೆಸರು | ಪದನಾಮ |
|---|---|---|
| 01 | ಶ್ರೀ.ಕೆ.ಎ.ಶಾಂತರಾಜ್ | ಉಪನಿರ್ದೇಶಕರು ಹಾಗೂ ಬಿ.ಬಿ.ಎಂ.ಪಿ ನೋಡಲ್ ಅಧಿಕಾರಿಗಳು (ವಾರ್ಡ್ ನಂ-02) |
| 02 | ಶ್ರೀ.ನರಸಿಂಹಯ್ಯ | ಸಹಾಯಕ ಅಭಿಯಂತರರು (ವಾರ್ಡ್ ನಂ-02) ಹಾಗೂ ಕಾರ್ಯದರ್ಶಿಗಳು |
| 03 | ಶ್ರೀಮತಿ. ಸುನಂದಮ್ಮ | ಹಿರಿಯ ಆರೋಗ್ಯ ಪರಿವೀಕ್ಷಕರು |
| 04 | ಶ್ರೀಮತಿ. ನಂದಶ್ರೀ. | ಕಿರಿಯ ಆರೋಗ್ಯ ಪರಿವೀಕ್ಷಕರು |
| 05 | ಶ್ರೀ.ಅಚುತಾನಂದ | ಅಸೆಸರ್ ವಾರ್ಡ್ ನಂ-2 |
| 06 | ಶ್ರೀ.ರಂಗಸ್ವಾಮಿ.ಪಿ | ರೆವಿನ್ಯೂ ಇನ್ಸ್‌ಪೇಕ್ಟರ್ ವಾರ್ಡ್ ನಂ-02 |
| 07 | ಶ್ರೀ.ಎಂ.ರಾಮರೆಡ್ಡಿ | ರೆವಿನ್ಯೂ ಇನ್ಸ್‌ಪೇಕ್ಟರ್ ವಾರ್ಡ್ ನಂ-02 |
| 08 | ಶ್ರೀ.ವಿನಯ ಕುಮಾರ್ ಪಿ.ಬಿ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯ |
| | ಬಡಾವಣೆ ಕ್ಷೇಮಾಭಿವೃದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು / ಸಾರ್ವಜನಿಕರು | |
| 01 | ಶ್ರೀ.ಹೇಮರಾಜ್ | ಸ್ಥಳೀಯ ಮುಖಂಡರು |
| 02 | ಶ್ರೀ. ಅ.ಬ ಶಿವಕುಮಾರ್ | ಸ್ಥಳೀಯ ಮುಖಂಡರು |
| 03 | ಶ್ರೀ.ರಾಮರೆಡ್ಡಿ | ಸ್ಥಳೀಯ ನಿವಾಸಿಗಳು |
| 04 | ಶ್ರೀ.ಎ.ಎಸ್.ರಾಜು | ಸ್ಥಳೀಯ ನಿವಾಸಿಗಳು |
| 05 | ಶ್ರೀ.ಶ್ರೀನಿವಾಸಲು | ಸ್ಥಳೀಯ ನಿವಾಸಿಗಳು |

ಶ್ರೀ.ನರಸಿಂಹಯ್ಯ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು ವಾರ್ಡ್ ನಂ–02 ರವರು ಸಭೆಗೆ ಹಾಜರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಬಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರ ಸಭೆಗೆ ಸ್ವಾಗತಿಸುತ್ತಾ ಸಭೆ ಪ್ರಾರಂಭಿಸಲು ನೋಡೆಲ್ ಅಧಿಕಾರಿರವರನ್ನು ಕೋರಲಾಯಿತು.

ಶ್ರೀ.ಶಾಂತರಾಜ್ ಕೆ.ಎ ಉಪನಿರ್ದೇಶಕರು ಹಾಗೂ ಸಮಿತಿಯ ನೋಡೆಲ್ ಅಧಿಕಾರಿಯವರು ಸಬೆಯನ್ನು ಪ್ರಾರಂಭಿಸಿ ಈ ಹಿಂದಿನ ಸಭೆಯಲ್ಲಿ ಅಂದರೆ ದಿನಾಂಕ: 4-6-2022 ರಂದು ನಡೆದ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆ ಕೇಳಿದರು. ಹಾಗೂ ವಾರ್ಡ್ ನಂ–02ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಸೂಚಿಸಿದರು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ವಾರ್ಡ್ ನಂ–02ರ ವ್ಯಾಪ್ತಿಯಲ್ಲಿರುವ ಕಾಮಾಕ್ಷಮ್ಮ ಬಡಾವಣೆ ಮತ್ತು ಕೊಂಡಪ್ಪ ಬಡಾವಣೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಯು.ಜಿ.ಡಿ ಲೈನ್ ಅನ್ನು ಚರಂಡಿಗೆ ಹರಿದುಬಿಡುತ್ತಿರುವ ಬಗ್ಗೆ ಅಕ್ಷೇಪಣೆಯನ್ನು ಸ್ಥಳಿಯ ಅ,ಬ ಶಿವಕುಮಾರ್ ಮತ್ತು ಸ್ಥಳೀಯ ಮುಖಂಡರಾದ ಶ್ರೀ.ಹೇಮರಾಜ್ ರವರು ಸಭೆಯಲ್ಲಿ ಅಕ್ಷೇಪಣೆ ವ್ಯಕ್ತಪಡಿಸಿದರು. | ಸದರಿ ವಿಷಯಕ್ಕೆ ಸಂಬಂದಿಸಿದಂತೆ ಮಾನ್ಯ ನೋಡಲ್ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಹಾಯಕ ಅಭಿಯಂತರರಾದ ಶ್ರೀ.ವಿನಯಕುಮಾರ್ ರವರಿಗೆ ತಿಳಿಸಿದರು. ಹಾಗೂ ಜಂಟಿ ತಪಾಸಣೆ ನಡೆಸಲು ಸೂಚಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್–2 |
| 02 | ವಾರ್ಡ್ ನಂ–02ರ ವ್ಯಾಪ್ತಿಯಲ್ಲಿನ ಪ್ರದೇಶಗಳಲ್ಲಿ ಪ್ರತಿದಿನ ಘನತ್ಯಾಜ್ಯ ನಿರ್ವಹಣೆ ಕೆಲಸವನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲವೆಂದು ಸಭೆಯಲ್ಲಿ ಶ್ರೀ.ಅ.ಬ ಶಿವಕುಮಾರ್ ರವರು ಅಕ್ಷೇಪಣೆ ವ್ಯಕ್ತಪಡಿಸಿದರು | ಸದರಿ ವಿಷಯಕ್ಕೆ ಸಂಬಂದಿಸಿದಂತೆ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಪ್ರತಿದಿನ ಸ್ಥಳ ಪರಿಶೀಲನೆ ಮಾಡಿ ಸ್ಥಳದಲ್ಲಿ ಘನತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಿರ್ವಹಣೆ ಮಾಡಲು ನೋಡೆಲ್ ಅಧಿಕಾರಿಗಳು ಸೂಚಿಸಿದರು. | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–2 |
| 03 | ವಾರ್ಡ್ ನಂ–02ರ ವ್ಯಾಪ್ತಿಯಲ್ಲಿನ ಪ್ರದೇಶಗಳಲ್ಲಿ ವಿದ್ಯುತ್ ದೀಪ ನಿರ್ವಹಣೆ ಕೆಲಸಗ್ಗಳನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲವೆಂದು ಸಭೆಯಲ್ಲಿ ಶ್ರೀ.ಅ.ಬ ಶಿವಕುಮಾರ್ ರವರು ಅಕ್ಷೇಪಣೆ ವ್ಯಕ್ತಪಡಿಸಿದರು | ಸದರಿ ವಿಷಯಕ್ಕೆ ಸಂಬಂದಿಸಿದಂತೆ ವಿದ್ಯುತ್ ನಿರ್ವಹಣೆ ಮಾಡಲು ಸಂಬಂದಿಸಿದ ಅಧಿಕಾರಿಗಳಿಗೆ ತಿಳಿಸುವುದಾಗಿ ನೋಡೆಲ್ ಅಧಿಕಾರಿಗಳು ಸಭೆಗೆ ತಿಳಿಸಿದರು | ಸಹಾಯಕ ಅಭಿಯಂತರರು ವಿದ್ಯುತ್ |
| 04 | ವಾರ್ಡ್ ನಂ–02ರ ವ್ಯಾಪ್ತಿಯಲ್ಲಿರುವ ಪ್ರದೇಶಗಳಿಗೆ ಸಮರ್ಪಕವಾಗಿ ಕಾವೇರಿನ ನೀರಿನ ಪೂರೈಕೆ ಮಾಡಲು ಸ್ಥಳೀಯರಾದ ಶ್ರೀ.ಹೇಮರಾಜ್ ರವರು ಸಭೆಯಲ್ಲಿ ಕೋರಿದರು | ಸದರಿ ವಿಷಯಕ್ಕೆ ಸಂಬಂದಿಸಿದಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಹಾಯಕ ಅಭಿಯಂತರರಾದ ಶ್ರೀ.ವಿನಯಕುಮಾರ್ ರವರಿಗೆ ಕಾವೇರಿ ನೀರಿನ ಸಮರ್ಪಕ ನಿರ್ವಹಣೆ ಮಾಡುವಂತೆ ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್–2 |

2022–23ನೇ ಸಾಲಿನ ಆಯವ್ಯಯದಲ್ಲಿ ಮಂಜೂರಾಗಿರುವ ಅನುದಾನದಡಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸಭೆಯಲ್ಲಿ ಚರ್ಚಿಸಿ ಅನುಮೋದಿಸಲಾಯಿತು.

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು, ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

29/06/2022

ಶ್ರೀ.ನರಸಿಂಹಯ್ಯ
ಸಹಾಯಕ ಅಭಿಯಂತರರು ಹಾಗೂ
ಕಾರ್ಯದರ್ಶಿಗಳು, ವಾರ್ಡ್ ನಂ–02

29/6/2022

ಶ್ರೀ.ಕೆ.ಎ.ಶಾಂತರಾಜ್
ಉಪನಿರ್ದೇಶಕರು ಹಾಗೂ
ನೋಡೆಲ್ ಅಧಿಕಾರಿಗಳು ವಾರ್ಡ್ ನಂ–02

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರಿಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬಿ.ಬಿ.ಎಂ.ಪಿ (ವಿದ್ಯುತ್) ಯಲಹಂಕ ವಲಯ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ಯಲಹಂಕ ವಿಭಾಗರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೇಸ್ಕಾಂ/ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯಲಹಂಕ ಉಪ ವಿಭಾಗರವರ ಸೂಕ್ತ ಕ್ರಮಕ್ಕಾಗಿ.
7. ಕಛೇರಿ ಕಡತಕ್ಕೆ.